# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2753 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 28.03.2022 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಿದ್ಯಾರ್ಥಿಗಳ ಅಪೌಷ್ಠಿಕತೆ ನೀಗಿಸಲು ಸರ್ಕಾರದಿಂದ ನೀಡಲಾಗುತ್ತಿರುವ ಯೋಜನೆಗಳಾವುವು; (ವಿವರ ನೀಡುವುದು) | ರಾಜ್ಯದ ವಿದ್ಯಾರ್ಥಿಗಳ ಅಪೌಷ್ಠಿಕತೆಯನ್ನು ನಿವಾರಿಸಲು ಜಾರಿಗೆ ತರಲಾಗಿರುವ ಯೋಜನೆಗಳ ವಿವರ ಕೆಳಕಂಡಂತಿದೆ.<br>1) ಮಧ್ಯಾಹ್ನ ಉಪಹಾರ ಯೋಜನೆ.<br>2) ಕ್ಷೀರಭಾಗ್ಯ ಯೋಜನೆ.<br>3) ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳ ಮತ್ತು ವಿಜಯಪುರ ಜಿಲ್ಲೆಯ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 1 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ 2021-22ನೇ ಸಾಲಿನಲ್ಲಿ ಮೊಟ್ಟೆ, ಮೊಟ್ಟೆ ತಿನ್ನದ ವಿದ್ಯಾರ್ಥಿಗಳಿಗೆ ಬಾಳೆಹಣ್ಣನ್ನು ಮಧ್ಯಾಹ್ನ ಉಪಹಾರ ಯೋಜನೆಯಡಿ ವಿತರಿಸಲಾಗುತ್ತಿದೆ.<br>4) ಆರೋಗ್ಯ ಇಲಾಖೆಯ ರಾಷ್ಟ್ರೀಯ ಬಾಲಸ್ವಾಸ್ಥ್ಯ ಕಾರ್ಯಕ್ರಮದಡಿ ವಾರದಲ್ಲಿ ಒಂದು ಬಾರಿ ಕಬ್ಬಿಣಾಂಶದ ಮಾತ್ರೆಯನ್ನು ಹಾಗೂ ವರ್ಷದಲ್ಲಿ ಎರಡು ಬಾರಿ ಜಂತುಹುಳು ನಿವಾರಣೆ ಮಾತ್ರೆಗಳನ್ನು ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ. |
| ಆ) | ಪ್ರಸ್ತುತ ಯಾವ ಯಾವ ಜಿಲ್ಲೆಯ, ಯಾವ ತರಗತಿಯ ವಿದ್ಯಾರ್ಥಿಗಳಿಗೆ ಸದರಿ ಸವಲತ್ತುಗಳನ್ನು ನೀಡಲಾಗುತ್ತಿದೆ; | ಮಧ್ಯಾಹ್ನ ಉಪಹಾರ ಯೋಜನೆಯಡಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿಯೂಟವನ್ನು ನೀಡಲಾಗುತ್ತಿದೆ.<br>ಕ್ಷೀರಭಾಗ್ಯ ಯೋಜನೆಯಡಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಬಿಸಿಹಾಲನ್ನು ನೀಡುತ್ತಿದೆ.<br>ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಾದ ಬೀದರ್, ಬಳ್ಳಾರಿ, ಕಲಬುರಗಿ, ಕೊಪ್ಪಳ, ರಾಯಚೂರು, ಯಾದಗಿರಿ, ವಿಜಯನಗರ ಮತ್ತು ವಿಜಯಪುರ ಜಿಲ್ಲೆಯ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 1 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ 2021-22ನೇ ಸಾಲಿನಲ್ಲಿ ಮೊಟ್ಟೆ, ಮೊಟ್ಟೆ ತಿನ್ನದ ವಿದ್ಯಾರ್ಥಿಗಳಿಗೆ ಬಾಳೆಹಣ್ಣನ್ನು ವಿತರಿಸಲಾಗುತ್ತಿದೆ.<br>ಆರೋಗ್ಯ ಇಲಾಖೆಯ ರಾಷ್ಟ್ರೀಯ ಬಾಲಸ್ವಾಸ್ಥ್ಯ ಕಾರ್ಯಕ್ರಮದಡಿ ವಾರದಲ್ಲಿ ಒಂದು ಬಾರಿ ಕಬ್ಬಿಣಾಂಶದ ಮಾತ್ರೆಯನ್ನು ಹಾಗೂ ವರ್ಷದಲ್ಲಿ ಎರಡು ಬಾರಿ ಜಂತುಹುಳು ನಿವಾರಣೆ ಮಾತ್ರೆಗಳನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ 1 ರಿಂದ 7ನೇ ತರಗತಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ. |

| | | |
|---|---|---|
| ಇ) | ಸದರಿ ಯೋಜನೆಯನ್ನು ರಾಜ್ಯದ ಇತರೆ ಜಿಲ್ಲೆಗಳಿಗೂ ವಿಸ್ತರಿಸುವಲ್ಲಿ ಸರ್ಕಾರಕ್ಕಿರುವ ತೊಂದರೆಗಳೇನು; | ಮಧ್ಯಾಹ್ನ ಉಪಹಾರ ಯೋಜನೆ, ಕ್ಷೀರಭಾಗ್ಯ ಯೋಜನೆ ಮತ್ತು ರಾಷ್ಟ್ರೀಯ ಬಾಲಸ್ವಾಸ್ಥ್ಯ ಕಾರ್ಯಕ್ರಮಗಳನ್ನು ಈಗಾಗಲೇ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲಾಗುತ್ತಿದೆ.<br><br>National Family Health Survey -2019-20 ವರದಿಯಾನುಸಾರ ರಾಜ್ಯದಲ್ಲಿ ಬೀದರ್, ಬಳ್ಳಾರಿ, ವಿಜಯನಗರ, ಕಲಬುರಗಿ, ಕೊಪ್ಪಳ, ರಾಯಚೂರು, ಯಾದಗಿರಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ 06 ರಿಂದ 15ನೇ ವಯೋಮಾನದವರೆಗಿನ ಶಾಲಾ ಮಕ್ಕಳಲ್ಲಿ ಅಂದರೆ 1 ರಿಂದ 8ನೇ ತರಗತಿ ಮಕ್ಕಳಲ್ಲಿ ಅಪೌಷ್ಠಿಕತೆ, ರಕ್ತಹೀನತೆ ಹಾಗೂ ಬಹುಪೋಷಕಾಂಶಗಳ ನ್ಯೂನತೆ ಅಧಿಕವಾಗಿರುವುದು ಕಂಡುಬಂದ ಕಾರಣ, ಇದರ ನಿವಾರಣೆಗಾಗಿ 2021-22ನೇ ಸಾಲಿನ ಮಧ್ಯಾಹ್ನ ಉಪಹಾರ ಯೋಜನೆಯ ವಾರ್ಷಿಕ ಕ್ರಿಯಾ ಯೋಜನೆಯ Project Approval Board ಸಭಾ ನಡವಳಿಯಲ್ಲಿ ಕೇಂದ್ರ ಸರ್ಕಾರದಿಂದ ಅನುಮೋದನೆ ನೀಡಲಾಗಿರುವ Flexibility for New Intervention ಚಟುವಟಿಕೆಗಳಡಿ ಮೇಲಿನ 07 ಜಿಲ್ಲೆಗಳಲ್ಲಿನ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1 ರಿಂದ 8 ನೇ ತರಗತಿಗಳ ವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪೂರಕ ಪೌಷ್ಠಿಕಾಂಶದ ರೂಪದಲ್ಲಿ (Supplementary Nutrition) 2021ರ ಡಿಸೆಂಬರ್ 1 ರಿಂದ ಪ್ರಾರಂಭಿಸಿ 2022ರ ಮಾರ್ಚ್ 30ರವರೆಗೆ ಲಭ್ಯವಾಗುವ ಒಟ್ಟು ನಾಲ್ಕು ತಿಂಗಳ ಅವಧಿಯಲ್ಲಿ **46 ದಿನಗಳಿಗೆ** ಮೊಟ್ಟೆ ಅಥವಾ ಮೊಟ್ಟೆ ಸೇವಿಸದ ಮಕ್ಕಳಿಗೆ ಬಾಳೆಹಣ್ಣು ವಿತರಿಸಲು ಕ್ರಮವಹಿಸಲಾಗಿದೆ.<br><br>ಈ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರವು 2021-22ನೇ ಸಾಲಿನಲ್ಲಿ Flexibility for New Intervention ಚಟುವಟಿಕೆಗಳಡಿ ನಿಗದಿಪಡಿಸಿ ಅನುದಾನದ ಮಿತಿಯಲ್ಲಿ ಪ್ರಾಯೋಗಿಕವಾಗಿ ಆದ್ಯತೆಯ ಮೇರೆಗೆ ರಾಜ್ಯದಲ್ಲಿನ ಬೀದರ್, ಬಳ್ಳಾರಿ, ವಿಜಯನಗರ, ಕಲಬುರಗಿ, ಕೊಪ್ಪಳ, ರಾಯಚೂರು, ಯಾದಗಿರಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಮಾತ್ರ ಸೀಮಿತಿಗೊಳಿಸಿ ಅನುಷ್ಠಾನ ಮಾಡಲಾಗಿದೆ. |
| ಈ) | ಯಾವ ಕಾಲಮಿತಿಯಲ್ಲಿ ಸದರಿ ಯೋಜನೆಯನ್ನು ಇತರೆ ಜಿಲ್ಲೆಗಳಿಗೂ ವಿಸ್ತರಿಸಲಾಗುವುದು? | 2021-22ನೇ ಸಾಲಿನಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯಡಿ ಮೊಟ್ಟೆ ಅಥವಾ ಬಾಳೆಹಣ್ಣನ್ನು ವಿದ್ಯಾರ್ಥಿಗಳಿಗೆ ವಿತರಿಸುವ ಕಾರ್ಯಕ್ರಮವನ್ನು ಅನುದಾನದ ಲಭ್ಯತೆಯ ಮೇರೆಗೆ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಿಗೆ ಮತ್ತು ವಿಜಯಪುರ ಜಿಲ್ಲೆಗೆ ಮಾತ್ರ ಸೀಮಿತಗೊಳಿಸಲಾಗಿದ್ದು, ಇತರೆ ಜಿಲ್ಲೆಗಳಿಗೆ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಇಪಿ 23 ಎಂಎಂಎಸ್ 2022

(ಬಿ.ಸಿ. ನಾಗೇಶ್)

**ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ**

**ಸಕಾಲ ಸಚಿವರು**